83 (210) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಸ್ಟೆಲ್‌ಗಳಿಗೆ ಪ್ರವೇಶ ಕೋರಿ ಹೆಚ್ಚಿನ ಬೇಡಿಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹೌದಾದಲ್ಲಿ, ಹಾಸ್ಟೇಲ್ ಸೀಟು ಹೆಚ್ಚಳ ಮಾಡಲು ಹಾಕಿಕೊಂಡಿರುವ ಯೋಜನೆಗಳೇನು ;

ಇ) ಸದರಿ ಯೋಜನೆಗಳನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) 2006-07ನೇ ಸಾಲಿನಲ್ಲಿ ರಾಜ್ಯದಲ್ಲಿನ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಯಲಗಳಲ್ಲಿರುವ ಮೂಲಭೂತ ಸೌಲಭ್ಯಗಳನ್ನು ಪರಿಗಣನೆಗೆ ತೆಗೆದುಕೊಂಡು ತಲಾ 10 ರಿಂದ 15ರಂತೆ ಸಂಖ್ಯಾಬಲ ಹೆಚ್ಚಿಸಿ ಸರ್ಕಾರದ ಆದೇಶ ಸಂ: ಸಕಣ 330 ಪಕವಿ 2006, ದಿನಾಂಕ 22-12-2006ರಲ್ಲಿ ಈಗಾಗಲೇ ಆದೇಶಿಸಲಾಗಿದೆ. ಅಲ್ಲದೇ ತುಮಕೂರು ಜಿಲ್ಲೆ ತಲಾ 50 ಸಂಖ್ಯಾ ಬಲವುಳ್ಳ ಐದು ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಆದೇಶ ಸಂ: ಸಕಣ 200 ಪಕವಿ 2006, ದಿ: 13-9-2006ರಲ್ಲಿ ಈಗಾಗಲೇ ಆದೇಶಿಸಿದೆ. ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿ:ವಿದ್ಯಾರ್ಥಿನಿಯರ ಸಂಖ್ಯಾಬಲ ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಇದಲ್ಲದೇ ಸರ್ಕಾರದ ಆದೇಶ ಸಂಖ್ಯೆ ಸಕಇ 315 ಪವಯೋ 06, ದಿ: 13-12-2006 ಮತ್ತು ಸಕಇ 220 ಪವಯೋ 06 (ಭಾ), ದಿ: 13-9-2006ರಲ್ಲಿ ತುಮಕೂರು ಜಿಲ್ಲೆಗೆ ನಾಲ್ಕು ಮೆಟ್ರಿಕ್‌ಪೂರ್ವ/ಮೆಟ್ರಿಕ್‌ನಂತರದ ವಿದ್ಯಾರ್ಥಿನಿಲಯಗಳನ್ನು ಹೊಸದಾಗಿ ಮಂಜೂರು ಮಾಡಿ ಆದೇಶ ಹೊರಡಿಸಲಾಗಿದೆ.

ಇ) ಸರ್ಕಾರದಿಂದ ಆದೇಶ ಹೊರಡಿಸಿದಾಗಿನಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

84 (172) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಕಲ್ಯಾಣದಲ್ಲಿ ನೂತನವಾಗಿ ಸಿದ್ದಗೊಂಡಿರುವ ರಕ್ತ ನಿಧಿಗೆ ಯಾವ ಉಪಕರಣಗಳನ್ನು ಮತ್ತು ವಾಹನಗಳನ್ನು ಒದಗಿಸಲಾಗಿದೆ.

ಆ) ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವ್ಯವಸ್ಥೆ ಹಾಗೂ ಈಗಿನ ಪರಿಸ್ಥಿತಿಯ ಬಗ್ಗೆ ವಿವರಗಳೇನು ;

ಇ) ಅಗತ್ಯವಿರುವ ಉಪಕರಣಗಳು ಮತ್ತು ಸಿಬ್ಬಂದಿ ವ್ಯವಸ್ಥೆ ಹಾಗೂ ಈಗಿನ ಪರಿಸ್ಥಿತಿಯ ಬಗ್ಗೆ ವಿವರಗಳೇನು ;

ಈ) ಒಂದು ವೇಳೆ ಅಗತ್ಯ ಉಪಕರಣ ಮತ್ತು ವಾಹನಗಳನ್ನು ಮಾತ್ರವಲ್ಲದೆ, ಅಗತ್ಯ ಸಿಬ್ಬಂದಿ ವರ್ಗದವರನ್ನು ಇದುವರೆವಿಗೂ ನಿಯೋಜನೆ ಮಾಡದಿದ್ದಲ್ಲಿ, ಸಾರ್ವಜನಿಕರ ಹಿತದೃಷ್ಟಿಯಿಂದ ಇವುಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೆ ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಸವಕಲ್ಯಾಣ ರಕ್ತನಿಧಿ ಸಂಗ್ರಹಣೆಗಾಗಿ ಇಲ್ಲಿಯವರೆಗೆ ಯಾವುದೇ ತರಹದ ಉಪಕರಣಗಳು ಹಾಗೂ ವಾಹನಗಳು ಸರಬರಾಜು ಆಗಿರುವುದಿಲ್ಲ.

ಆ) ರಕ್ತನಿಧಿ ಸಂಗ್ರಹಣೆಯಡಿಯಲ್ಲಿ ಇಲ್ಲಿಯವರೆಗೆ ಸಿಬ್ಬಂದಿಯ ಮಂಜೂರಾತಿಯಾಗಿರುವುದಿಲ್ಲ. ಸಾರ್ವಜನಿಕ ಆಸ್ಪತ್ರೆ ಬಸವಕಲ್ಯಾಣದಲ್ಲಿ ಒಟ್ಟು 108 ಸಿಬ್ಬಂದಿ ವರ್ಗ ಮಂಜೂರಾಗಿದ್ದು ಇದರಲ್ಲಿ 52 ಸಿಬ್ಬಂದಿ ವರ್ಗದವರು ಕಾರ್ಯನಿರ್ವಹಿಸುತ್ತಿದ್ದಾರೆ.

ಇ) ರಕ್ತನಿಧಿ ಸಂಗ್ರಹಣೆಯಲ್ಲಿ ಯಾವುದೇ ತರಹದ ಉಪಕರಣಗಳು ಹಾಗೂ ಸಿಬ್ಬಂದಿ ವ್ಯವಸ್ಥೆ ಇರುವುದಿಲ್ಲ.

ಈ) ಹಣಕಾಸಿನ ಲಭ್ಯತೆ ಆಧರಿಸಿ ಕ್ರಮ ಕೈಗೊಳ್ಳಲಾಗುತ್ತದೆ.

85 (173) ಶ್ರೀ ಮಲ್ಲಿಕಾರ್ಜುನ್‌ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಕಲ್ಯಾಣ ಮತ ಕ್ಷೇತ್ರದಲ್ಲಿ ಇರುವ ಮೊರಾರ್ಜಿ ವಸತಿ ಶಾಲೆಗಳು ಮತ್ತು ಆಶ್ರಮ ಶಾಲೆಗಳ ಸಂಖ್ಯೆ ಎಷ್ಟು ಹಾಗೂ ಇವು ಯಾವ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ;

ಆ) ಇವುಗಳಿಗೆ ಮಂಜೂರಾತಿ ನೀಡಿದ್ದು ಯಾವಾಗ ಹಾಗೂ ಈ ವಸತಿ ಶಾಲೆಗಳಿಗೆ ಹಾಗೂ ಆಶ್ರಮ ಶಾಲೆಗಳಿಗೆ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ;

ಇ) ಈ ಶಾಲೆಗಳಿಗೆ ಯಾವ ಯಾವ ಮೂಲಭೂತ ಸೌಕರ್ಯಗಳ ಕೊರತೆ ಇದೆ ;

ಈ) ಕೊರತೆಗಳನ್ನು ನೀಗಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ;

ಉ) ಈ ಶಾಲೆಗಳ ಮಂಜೂರಾತಿಯಿಂದ ಇಲ್ಲಿಯವರೆವಿಗೆ ಮಂಜೂರಾದ, ಬಿಡುಗಡೆಯಾದ ಮತ್ತು ಖರ್ಚಾದ ಹಣದ ಮೊತ್ತವೆಷ್ಟು ; (ವರ್ಷವಾರು ಮತ್ತು ಶಾಲೆವಾರು ವಿವರಗಳನ್ನು ಒದಗಿಸುವುದು) ;

(ಊ) ಈ ಪ್ರಸಕ್ತ ಸಾಲಿನಲ್ಲಿ ಈ ಮತಕ್ಷೇತ್ರದ ಯಾವ ಯಾವ ಗ್ರಾಮಗಳಲ್ಲಿ ಹೊಸದಾಗಿ ವಸತಿ ಶಾಲೆ ಮತ್ತು ಆಶ್ರಮ ಶಾಲೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆ?